# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಸಾ&ಅ:ಸುತ್ತೋಲೆ:2021-22/3675 ದಿನಾಂಕ:20.10.2022

## : ಸುತ್ತೋಲೆ :

ವಿಷಯ: 2022ನೇ ಸಾಲಿನ ಕನ್ನಡ ರಾಜ್ಯೋತ್ಸವದ ಅಂಗವಾಗಿ ದಿನಾಂಕ:28.10.2022 ರಂದು ಕೋಟಿ ಕಂಠ ಗೀತ ಗಾಯನ ಕಾರ್ಯಕ್ರಮವನ್ನು ಆಯೋಜಿಸುವ ಕುರಿತು.

ಉಲ್ಲೇಖ: 1. ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 108 ವಿವಿಧ 2022 ದಿನಾಂಕ:15.10.2022

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ:19.10.2022

* * * * *

ನಾಡು-ನುಡಿಯ ಬಗ್ಗೆ ಅಭಿಮಾನ ಹಾಗೂ ನಮ್ಮ ಪರಂಪರೆಯ ಬಗ್ಗೆ ಹೆಮ್ಮೆ ಮೂಡಿಸುವ ಸಲುವಾಗಿ 2022ನೇ ಸಾಲಿನ ಕನ್ನಡ ರಾಜ್ಯೋತ್ಸವ ಅಂಗವಾಗಿ ದಿನಾಂಕ:28.10.2022 ರಂದು 11.00 ಗಂಟೆಗೆ **"ಕೋಟಿ ಕಂಠ ಗೀತ ಗಾಯನ ಕಾರ್ಯಕ್ರಮ"** ವನ್ನು ಆಯೋಜಿಸುವಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯಲ್ಲಿ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ವಿಶ್ವವಿದ್ಯಾನಿಲಯದ ಎಲ್ಲಾ ಸಂಯೋಜಿತ ಕಾಲೇಜುಗಳಲ್ಲಿ 2022ನೇ ಸಾಲಿನ ಕನ್ನಡ ರಾಜ್ಯೋತ್ಸವದ ಅಂಗವಾಗಿ **ದಿನಾಂಕ:28.10.2022 ರ ಶುಕ್ರವಾರದಂದು 11.00 ಗಂಟೆಗೆ "ಕೋಟಿ ಕಂಠ ಗೀತ ಗಾಯನ ಕಾರ್ಯಕ್ರಮ"** ವನ್ನು ಆಯೋಜಿಸುವಂತೆ ತಿಳಿಸಲಾಗಿದೆ.

**ಕೋಟಿ ಕಂಠ ಗೀತ ಗಾಯನಕ್ಕೆ ನೋಂದಣಿ** – ಕಾರ್ಯಕ್ರಮದಲ್ಲಿ ಭಾಗವಹಿಸುವವರು https://kannadasiri.karnataka.gov.in/kkg/public/ ಲಿಂಕ್‌ಗೆ ಭೇಟಿ ನೀಡಿ ಅಕ್ಟೋಬರ್ 14 ರಿಂದ 28 ರವರೆಗೆ ನೋಂದಣಿ ಮಾಡಿಕೊಳ್ಳಬಹುದಾಗಿದೆ.

ಆದೇಶದ ಮೇರೆಗೆ

20/10/22

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಅಡಕ: ಸರ್ಕಾರದ ಸುತ್ತೋಲೆ ಪ್ರತಿ

ಗೆ,

**ಪ್ರಾಂಶುಪಾಲರು, ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

ಪ್ರತಿಗಳು

1. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.(ವಿವಿ ಜಾಲತಾಣದಲ್ಲಿ ಪ್ರದರ್ಶಿಸಲು ಹಾಗೂ ಎಲ್ಲಾ ಕಾಲೇಜುಗಳಿಗೆ ಇ- ಮೇಲ್ ಕಳಿಹಿಸಲು ಸೂಚಿಸಿದೆ).
2. ಮಾನ್ಯ ಕುಲಪತಿಗಳ ಆಪ್ತಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು
3. ಕಚೇರಿ ಪ್ರತಿ

ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 108 ವಿವಿಧ 2022

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:15-10-2022

## ಸುತ್ತೋಲೆ

ವಿಷಯ: 2022ನೇ ಸಾಲಿನ ಕನ್ನಡ ರಾಜ್ಯೋತ್ಸವದ ಅಂಗವಾಗಿ ಕೋಟಿ ಕಂಠ ಗೀತ ಗಾಯನ ಕಾರ್ಯಕ್ರಮವನ್ನು ಆಯೋಜಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ:ಡಿಕೆಸಿ:33014:22:2022 (ಭಾಗ-3), ದಿನಾಂಕ 13.10.2022.

*****

ನಾಡು-ನುಡಿಯ ಬಗ್ಗೆ ಅಭಿಮಾನ ಹಾಗೂ ನಮ್ಮ ಪರಂಪರೆಯ ಬಗ್ಗೆ ಹೆಮ್ಮೆ ಮೂಡಿಸುವ ಗೀತೆ, ಕವನಗಳನ್ನು ನಾಡಿನ ಹೆಮ್ಮೆಯ ಕವಿಗಳು ರಚಿಸಿದ್ದು, ಇವುಗಳ ಕೇಳುವಿಕೆಯು ನಮ್ಮಲ್ಲಿ ಅಭಿಮಾನವನ್ನು ಮೂಡಿಸುತ್ತದೆ. ಈ ದೃಷ್ಟಿಯಿಂದ ಈ ಗೀತೆಗಳು "ಕನ್ನಡದ ಶಕ್ತಿ". ಕಳೆದ ರಾಜ್ಯೋತ್ಸವದ ಸಂದರ್ಭದಲಿ ಪ್ರಾತಿನಿಧಿಕವಾಗಿ ಆಯ್ದ 3 ಕನ್ನಡ ಗೀತೆಗಳ ಸಮೂಹ ಗಾಯನವನ್ನು ವಿನೂತನವಾಗಿ 'ಲಕ್ಷ ಕಂಠ ಗೀತ ಗಾಯನ' ಶೀರ್ಷಿಕೆಯಡಿ ರಾಜ್ಯಾದ್ಯಂತ ಆಯೋಜಿಸಿ ಯಶಸ್ವಿಗೊಳಿಸಿದ ನಿಟ್ಟಿನಲ್ಲಿ, ಈ ವರ್ಷವೂ ಅಕ್ಟೋಬರ್ 28 ರಂದು **'ಕೋಟಿ ಕಂಠ ಗೀತ ಗಾಯನ' ಕಾರ್ಯಕ್ರಮವನ್ನು** ಸರ್ಕಾರದ ವತಿಯಿಂದ ಆಯೋಜಿಸಲಾಗುತ್ತಿದ್ದು, ಈ ವಿಶೇಷ ಕಾರ್ಯಕ್ರಮದಲ್ಲಿ ಒಂದು ಕೋಟಿ ಜನರನ್ನು ಭಾಗಿಯಾಗಿಸಲು ಉದ್ದೇಶಿಸಲಾಗಿದೆ.

ಕಾರ್ಯಕ್ರಮದ ವಿವರಗಳು:-

1. **'ನನ್ನ ನಾಡು-ನನ್ನ ಹಾಡು' ಸಮೂಹ ಗೀತ ಗಾಯನ** - ಅಕ್ಟೋಬರ್-28 ರಂದು ಶುಕ್ರವಾರ ಕನ್ನಡ ನಾಡು-ನುಡಿಯ ಶ್ರೇಷ್ಠತೆಯನ್ನು ಸಾರುವ -

   ಅ. ನಾಡಗೀತೆ

   ಆ. ಹುಯಿಲಗೋಳ ನಾರಾಯಣರಾಯರ 'ಉದಯವಾಗಲಿ ನಮ್ಮ ಚೆಲುವ ಕನ್ನಡನಾಡು'

   ಇ. ರಾಷ್ಟ್ರಕವಿ ಕುವೆಂಪುರವರ **'ಬಾರಿಸು ಕನ್ನಡ ಡಿಂಡಿಮವ'**

   ಈ. ಡಾ. ಡಿ.ಎಸ್. ಕರ್ಕಿಯವರ 'ಹಚ್ಚೇವು ಕನ್ನಡದ ದೀಪ'

   ಉ. ನಾಡೋಜ ಡಾ. ಚೆನ್ನವೀರ ಕಣವಿಯವರ 'ವಿಶ್ವವಿನೂತನ ವಿದ್ಯಾಚೇತನ'

   ಊ. ಡಾ. ಹಂಸಲೇಖರವರ 'ಹುಟ್ಟಿದರೆ ಕನ್ನಡ ನಾಡಲ್ಲಿ ಹುಟ್ಟಬೇಕು'

2. **ಕೋಟಿ ಕಂಠ ಗೀತ ಗಾಯನಕ್ಕೆ ನೋಂದಣಿ** - ಕಾರ್ಯಕ್ರಮದಲ್ಲಿ ಭಾಗವಹಿಸುವವರನ್ನು ನೋಂದಾಯಿಸಿ, ಭಾಗವಹಿಸಿದವರಿಗೆ ಸ್ವಯಂಚಾಲಿತ ಆನ್‌ಲೈನ್ ಪ್ರಮಾಣಪತ್ರ ನೀಡಲು

ಉದ್ದೇಶಿಸಿದೆ. ಅದರ ಅಂಗವಾಗಿ ಅಕ್ಟೋಬರ್ 14 ರಿಂದ 28 ರವರೆಗೆ ನೋಂದಣಿ ಅಭಿಯಾನ ಮಾಡಲು ಆಯೋಜಿಸಲಾಗಿದ್ದು, ಆನ್‌ಲೈನ್ ನೋಂದಣಿಗಾಗಿ ಲಿಂಕ್ https://kannadasiri.karnataka.gov.in/kkg/public/ ಗೆ ಭೇಟಿ ನೀಡುವುದು.

ಆದುದರಿಂದ, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸರ್ಕಾರಿ/ಖಾಸಗಿ/ಡೀಮ್ಡ್/ಸ್ವಾಯತ್ತ ವಿಶ್ವವಿದ್ಯಾಲಯಗಳು ಹಾಗೂ ಎಲ್ಲಾ ಸರ್ಕಾರಿ/ಅನುದಾನಿತ/ಖಾಸಗಿ ಕಾಲೇಜುಗಳು, ಸಂಸ್ಥೆಗಳು ಮತ್ತು ಕಛೇರಿಗಳು 2022ನೇ ಸಾಲಿನ ಕನ್ನಡ ರಾಜ್ಯೋತ್ಸವದ ಪ್ರಯುಕ್ತ ರಾಜ್ಯಾದ್ಯಂತ ಕೋಟಿ ಕಂಠ ಗೀತ ಗಾಯನ ಕಾರ್ಯಕ್ರಮವನ್ನು ಅಗತ್ಯ ಪೂರ್ವಸಿದ್ಧತೆಯೊಂದಿಗೆ ದಿನಾಂಕ:28.10.2022 ರಂದು 11 ಗಂಟೆಗೆ ತಮ್ಮ ಕಾಲೇಜು/ವಿಶ್ವವಿದ್ಯಾಲಯ/ಕಛೇರಿ/ಸಂಸ್ಥೆಯ ಹಂತದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಅರ್ಥಪೂರ್ಣವಾಗಿ ಆಯೋಜಿಸಲು ಸೂಚಿಸಲಾಗಿದೆ. ಕೂಡಲೇ ಭಾಗವಹಿಸುವವರ ವಿವರಗಳನ್ನು ಆನ್‌ಲೈನ್ ನೋಂದಣಿ ಮಾಡಲು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಕುಲಸಚಿವರು (ಆಡಳಿತ)/ ಸಂಬಂಧಪಟ್ಟ ಕಾಲೇಜುಗಳ ಪ್ರಾಂಶುಪಾಲರು ಮತ್ತು ಸಂಸ್ಥೆ/ಕಛೇರಿಗಳ ಮುಖ್ಯಸ್ಥರು ಅಗತ್ಯ ಕ್ರಮ ತೆಗೆದುಕೊಳ್ಳಲು ಕಾರ್ಯ ಪ್ರವೃತ್ತರಾಗಲು ಸಹ ಸೂಚಿಸಲಾಗಿದೆ.

(ನಂದಕುಮಾರ್ ಬಿ)
ಸರ್ಕಾರದ ಅಧೀನ ಕಾರ್ಯದರ್ಶಿ,
(ವಿಶ್ವವಿದ್ಯಾಲಯ-2 ಮತ್ತು ಸಮನ್ವಯ)
ಉನ್ನತ ಶಿಕ್ಷಣ ಇಲಾಖೆ

ಇವರಿಗೆ,

1. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು
2. ಎಲ್ಲಾ ಕುಲಪತಿಗಳು/ಕುಲಸಚಿವರುಗಳು, ಸರ್ಕಾರಿ/ಖಾಸಗಿ/ಡೀಮ್ಡ್/ಸ್ವಾಯತ್ತ ವಿಶ್ವವಿದ್ಯಾಲಯಗಳು
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು.
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
5. ಎಲ್ಲಾ ಪ್ರಾಂಶುಪಾಲರು, ಸರ್ಕಾರಿ/ಅನುದಾನಿತ/ಖಾಸಗಿ ಪದವಿ ಕಾಲೇಜುಗಳು, ಇಂಜಿನಿಯರಿಂಗ್ ಕಾಲೇಜುಗಳು, ಡಿಪ್ಲೋಮಾ ಕಾಲೇಜುಗಳು.
6. ಮುಖ್ಯಸ್ಥರು, ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಎಲ್ಲಾ ಸರ್ಕಾರಿ ಮತ್ತು ಖಾಸಗಿ ಸಂಸ್ಥೆಗಳು
7. ವಿಶೇಷಾಧಿಕಾರಿ ಇ-ಆಡಳಿತ ಉನ್ನತ ಶಿಕ್ಷಣ ಇಲಾಖೆ - ಇಲಾಖೆಯ ಅಧಿಕೃತ ಜಾಲತಾಣದಲ್ಲಿ ಪ್ರಕಟಿಸಲು

ಪ್ರತಿ:

1) ಸರ್ಕಾರದ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು
2) ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ವಿಕಾಸಸೌಧ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
4) ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.

ಅನುಬಂಧ – 1

ದಿನಾಂಕ: 28.10.2022 ರಂದು ಬೆಳಗ್ಗೆ: 11.00 ಗಂಟೆಯ ಕೋಟಿಕಂಠ ಗೀತಗಾಯನ ಕಾರ್ಯಕ್ರಮದ ರೂಪುರೇಷೆ.

| ಕ್ರ.ಸಂ. | ಕಾರ್ಯಕ್ರಮ | ಅವಧಿ |
|---|---|---|
| 1 | ಸ್ವಾಗತ ಮತ್ತು ಪ್ರಾಸ್ತಾವಿಕ ನುಡಿಗಳು | 4 ನಿಮಿಷ |
| 2 | ನಾಡಗೀತೆ | 2.30 ನಿಮಿಷ |
| 3 | ಐದು ಗೀತೆಗಳನ್ನು ಹಾಡುವುದು | 20 ರಿಂದ 25 ನಿಮಿಷ |
| 4 | ಸಂಕಲ್ಪವಿಧಿ | 2 ನಿಮಿಷ |
| 5 | ವಂದನಾರ್ಪಣೆ | 2 ನಿಮಿಷ |